**All India Radio: Bangalore**
**Regional Bulletin In Kannada**
**15.11.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.11.2025 / 6.40 p.m.**

***************

ಮುಖ್ಯಾಂಶಗಳು

೧. ಸಂಘಟಿತ ಪ್ರಯತ್ನದಿಂದ ದೇವದಾಸಿ ಪದ್ಧತಿ ನಿರ್ಮೂಲನೆ ಸಾಧ್ಯ - ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅಭಿಮತ

೨. ಬೆಳಗಾವಿ ಮೃಗಾಲಯದಲ್ಲಿ ಬ್ಯಾಕ್ಟೀರಿಯಾ ಸೋಂಕಿನಿಂದ ೨೮ ಕೃಷ್ಣಮೃಗಗಳು ಸಾವು - ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಆದೇಶ

೩. ಹುಬ್ಬಳ್ಳಿಯಲ್ಲಿ ಸರ್ದಾರ್ ಏಕತಾ ನಡಿಗೆಗೆ ಚಾಲನೆ ನೀಡಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೪. ನಂದಿನಿ ಬ್ರ್ಯಾಂಡ್ ಹೆಸರಲ್ಲಿ ನಕಲಿ ತುಪ್ಪ ಮಾರಾಟ ಜಾಲ ಪತ್ತೆ ; ನಾಲ್ವರ ಬಂಧನ

***************

ಸಂಘಟಿತ ಪ್ರಯತ್ನದಿಂದ ಮಾತ್ರ ದೇವದಾಸಿ ಆಚರಣೆಯಂತಹ ಅನಿಷ್ಠ ಪದ್ಧತಿಯನ್ನು ಬೇರು ಸಹಿತ ಕಿತ್ತೆಸೆಯಲು ಸಾಧ್ಯ ಎಂದು ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರಾಯಚೂರಿನಲ್ಲಿ ಆಯೋಜಿಸಿದ್ದ ಆರೋಗ್ಯ ಶಿಬಿರ ಹಾಗೂ ಕಾನೂನು ಸಾಕ್ಷರತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ

ಅವರು, ಪುಸ್ತಕಗಳಲ್ಲಿ ಕಾನೂನು ಇದ್ದರೆ ಸಾಲದು, ದೇವದಾಸಿ ಪದ್ಧತಿಯ ನಿರ್ಮೂಲನೆಗೆ ಪ್ರತಿಜ್ಞೆ ಮಾಡಬೇಕು ಎಂದು ತಿಳಿಸಿದ್ದಾರೆ.

***************

ಬೆಳಗಾವಿ ಕಿತ್ತೂರು ರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿದ್ದ ೨೮ ಕೃಷ್ಣಮೃಗಗಳು ಸಾವನ್ನಪ್ಪಿವೆ. ನವೆಂಬರ್ ೧೩ ರಂದು ೮, ಇಂದು ಮತ್ತೆ ೨೦ ಕೃಷ್ಣಮೃಗಳು ಸಾವನ್ನಪ್ಪಿವೆ ಎಂದು ಅರಣ್ಯ ಇಲಾಖೆ ಅಧಿಕಾರಿ ನಾಗರಾಜ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ನಾಗರಾಜ್ ಅರಣ್ಯ ಅಧಿಕಾರಿ (೩೭ ಸೆಕೆಂಡ್‌ಗಳು)

ಬ್ಯಾಕ್ಟೀರಿಯಾ ಸೋಂಕಿನಿಂದ ಕೃಷ್ಣಮೃಗಗಳು ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದ್ದು, ಬೆಂಗಳೂರಿನ ಬನ್ನೇರುಘಟ್ಟದ ಪಶು ವಿಜ್ಞಾನ ಸಂಸ್ಥೆಯ ತಜ್ಞ ವೈದ್ಯರು ಆಗಮಿಸಿ ಪರೀಕ್ಷೆ ನಡೆಸಲಿದ್ದಾರೆ.

ನವೆಂಬರ್ ೧೩ ರಂದು ಸಾವನ್ನಪ್ಪಿದ್ದ ಕೃಷ್ಣ ಮೃಗಗಳ ಮರಣೋತ್ತರ ಪರೀಕ್ಷೆ ನಡೆಸಿ ಸ್ಯಾಂಪಲ್‌ಅನ್ನು ಮೈಸೂರಿನ ಪ್ರಯೋಗಾಲಯಕ್ಕೆ ರವಾನಿಸಲಾಗಿತ್ತು. ವರದಿ ಬರುವ ಮುನ್ನವೇ ೨೦ ಕೃಷ್ಣ ಮೃಗಗಳು ಸಾವನ್ನಪ್ಪಿವೆ. ಘಟನೆ ಕುರಿತಂತೆ ತನಿಖೆಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶ ನೀಡಿದ್ದಾರೆ.

***************

ಶ್ರೇಷ್ಠ ಭಾರತ ಆಗುವತ್ತ ನಾವೆಲ್ಲರೂ ಸಂಕಲ್ಪ ಮಾಡಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವತಿಯಿಂದ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ಆವರಣದಲ್ಲಿಂದು ಏರ್ಪಡಿಸಿದ್ದ ಸರ್ದಾರ್ ಏಕತಾ ನಡಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಬಂಕಿಂಚಂದ್ರ ಚಟರ್ಜಿ ಬರೆದ 'ವಂದೇ ಮಾತರಂ' ಗೀತೆ ಹಾಗೂ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನ್ಮ ದಿನವು ೧೫೦ನೇ ವರ್ಷಕ್ಕೆ ಪದಾರ್ಪಣೆ ಮಾಡಿದೆ. ಇತಿಹಾಸವನ್ನು ಓದಿದದವರು ಇತಿಹಾಸ ನಿರ್ಮಾಣ ಮಾಡುವತ್ತ ಹೆಜ್ಜೆ ಇಡಬೇಕು ಎಂದು ಕರೆ ನೀಡಿದ್ದಾರೆ.

ಧ್ವನಿ : ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

ಎನ್‌ಎಸ್‌ಎಸ್ ಅಧಿಕಾರಿ ಎಂ.ಬಿ. ದಳಪತಿ ಪ್ರತಿಜ್ಞಾ ವಿಧಿ ಬೋಧಿಸಿದರು. ಕೆಎಲ್‌ಇ ತಾಂತ್ರಿಕ ವಿವಿಯಿಂದ ಆರಂಭವಾದ ನಡಿಗೆಯು ತೋಳನಕೆರೆವರೆಗೆ ತಲುಪಿ ಸಂಪನ್ನಗೊಂಡಿತು.

***************

ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ - ಕೆ-ಸೆಟ್ ತಾತ್ಕಾಲಿಕ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ.

ಫಲಿತಾಂಶ ಸಂಬಂಧ ಆಕ್ಷೇಪಣೆಗಳಿದ್ದಲ್ಲಿ ಇದೇ ೧೭ ರಂದು ಮಧ್ಯಾಹ್ನ ೧೨ ಗಂಟೆಯೊಳಗೆ ಪೂರಕ ದಾಖಲೆಗಳೊಂದಿಗೆ ಸಲ್ಲಿಸಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ಕೀ ಉತ್ತರಗಳಿಗೆ ಸಂಬಂಧಿಸಿದ ಅಥವಾ ಪೂರಕ ದಾಖಲೆಗಳಿಲ್ಲದೇ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಹೇಳಿದ್ದಾರೆ.

***************

ನಂದಿನಿ ಬ್ರ್ಯಾಂಡ್ ಹೆಸರಲ್ಲಿ ಬೃಹತ್ ನಕಲಿ ತುಪ್ಪ ಮಾರಾಟ ಜಾಲವನ್ನು ಸಿಸಿಬಿ ಮತ್ತು ಕೆಎಂಎಫ್ ಜಂಟಿ ಕಾರ್ಯಾಚರಣೆ ನಡೆಸಿ ಬೇಧಿಸಿದೆ. ತಮಿಳುನಾಡಿನಲ್ಲಿ ಕಲಬೆರಕೆ ಮಾಡಿ ಅದನ್ನು ಮತ್ತೆ ರಾಜ್ಯಕ್ಕೆ ತಂದು ಮಾರಾಟ ಮಾಡಲಾಗುತ್ತಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

ಬಂಧಿತರಿಂದ ೧ ಕೋಟಿ ೨೬ ಲಕ್ಷ ರೂಪಾಯಿ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ಬೆಂಗಳೂರಿನಿಂದ ತಮಿಳುನಾಡಿಗೆ ಶುದ್ಧ ನಂದಿನಿ ತುಪ್ಪ ಪೂರೈಕೆ ಮಾಡಿ ತಮಿಳುನಾಡಿನಲ್ಲಿ ಕಲಬೆರಕೆ ಮಾಡುತ್ತಿದ್ದರು. ೧ ಲೀಟರ್ ತುಪ್ಪಕ್ಕೆ ೪ ಲೀಟರ್ ನಕಲಿ ತುಪ್ಪ, ತೆಂಗಿನ ಎಣ್ಣೆ, ಡಾಲ್ಡಾ ಬೆರಸಿ ಮತ್ತೆ ರಾಜ್ಯಕ್ಕೆ ತಂದು ಮಾರಾಟ ಮಾಡುತ್ತಿದ್ದರು ಎಂದು ಮಾಹಿತಿ ನೀಡಿದ್ದಾರೆ.

***************

ಸಹಕಾರ ಸಂಘಗಳು ರೈತರ ಜೀವನಾಡಿಯಾಗಿದ್ದು, ಇದರಿಂದ ರೈತರ ಬದುಕು ಸುಧಾರಣೆಗೊಳ್ಳಲಿವೆ ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ.

೭೨ನೇ ಅಖಿಲ ಭಾರತ ಸಹಕಾರ ಸಪ್ತಾಹ-೨೦೨೫ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಸ್ಥೆಗಳು ಅಭಿವೃದ್ಧಿಗಾಗಿ ಸರ್ಕಾರದಿಂದ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಕಾಲಕಾಲಕ್ಕೆ ಸಾಲ ಸೌಲಭ್ಯ ನೀಡಿ ರೈತರ ಬೆನ್ನಿಗೆ ನಿಂತಿರುವ ಸಹಕಾರ ಸಂಘಗಳಿಂದ ರೈತರ ಅಭಿವೃದ್ಧಿ ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

***************

ಕೇಂದ್ರ ಸರ್ಕಾರ ರೈತರಿಗೆ ಶಕ್ತಿತುಂಬುವ ಕಾರ್ಯ ನಡೆಸುತ್ತಿದೆ ಎಂದು ಸಂಸದ ಬಿ.ವೈ. ರಾಘವೇಂದ್ರ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವರ್ಷ ೬೦ ಸಾವಿರ ರೈತರಿಗೆ ೧ ಲಕ್ಷ ಎಕರೆಗೆ ಅಡಿಕೆ ಬೆಳೆಹಾನಿ ಪರಿಹಾರ ಸಿಗಲಿದೆ. ಅಲ್ಲದೆ ೩ ಸಾವಿರ ಎಕರೆಯಲ್ಲಿ ಬೆಳೆದ ಶುಂಠಿ, ಮಾವು ಪರಿಹಾರ ಕೂಡ ರೈತರ ಖಾತೆಗೆ ಜಮಾ ಆಗಲಿದೆ ಎಂದು ಹೇಳಿದ್ದಾರೆ.

ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ವ್ಯಾಪಕ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಈಗಾಗಲೇ ಕೇಂದ್ರ ಸರ್ಕಾರ ಮರುಪರಿಶೀಲನೆಗೆ ರಾಜ್ಯ ಸರ್ಕಾರಕ್ಕೆ ಕಳುಹಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಜಾರ್ಖಂಡ್‌ನ ಬಿಸ್ರಾ ಮುಂಡ ಅವರು ಬ್ರಿಟಿಷ್ ಸೈನ್ಯಕ್ಕೆ ಸಿಂಹ ಸ್ವಪ್ನವಾಗಿದ್ದರು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ ತಿಳಿಸಿದ್ದಾರೆ. ಭಗವಾನ್ ಬಿಸ್ರಾ ಮುಂಡಾ ಅವರ ೧೫೦ನೇ ಜನ್ಮ ಜಯಂತಿ ಅಂಗವಾಗಿ ೫ನೇ ವರ್ಷದ ಜನ ಜಾತಿಯ ಗೌರವ್ ದಿವಸ್ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಬಿಸ್ರಾ ಮುಂಡ ಬುಡಕಟ್ಟು ಜನಾಂಗದ ಅತ್ಯಂತ ಮಹತ್ವ ಪೂರ್ಣ ಹಾಗೂ ಪ್ರಭಾವಶಾಲಿ ವ್ಯಕ್ತಿ ಎಂದು ಹೇಳಿದ್ದಾರೆ.

ಇಂದಿನ ಯುವ ಜನತೆಗೆ ಬಿರ್ಸಾ ಮುಂಡಾ ಅವರ ಧೈರ್ಯ, ನಾಯಕತ್ವ ಗುಣಗಳು ಸ್ಪೂರ್ತಿಯಾಗಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ತಿಳಿಸಿದ್ದಾರೆ.

ಚಿಕ್ಕಮಗಳೂರು ನಗರದ ಕುವೆಂಪು ಕಲಾ ಮಂದಿರದಲ್ಲಿ ಭಗವಾನ್ ಬಿರ್ಸಾ ಮುಂಡ ಜಯಂತಿ ಹಾಗೂ ಜನಜಾತೀಯ ಗೌರವ ದಿನ ಕಾರ್ಯಕ್ರಮ ಆಚರಿಸಲಾಯಿತು.ಶಾಸಕ ಹೆಚ್.ಡಿ ತಮ್ಮಯ್ಯ ಕಾರ್ಯಕ್ರಮ ಉದ್ಘಾಟಿಸಿದರು.

***************

ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮೇಯರ್ ಆಗಿ ೨೩ನೇ ವಾರ್ಡಿನ ಕಾಂಗ್ರೆಸ್ ಸದಸ್ಯ, ಪಿ.ಗಾದೆಪ್ಪ, ಉಪಮೇಯರ್ ಆಗಿ ೨೮ನೇ ವಾರ್ಡಿನ ಸದಸ್ಯೆ ಮೊಬಿನಾ ಬೀ ಆಯ್ಕೆಯಾಗಿದ್ದಾರೆ.

ಕಲಬುರಗಿಯ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಫಲಿತಾಂಶ ಘೋಷಣೆ ಮಾಡಿದ್ದಾರೆ.

***************

ಸಾಲುಮರದ ತಿಮ್ಮಕ್ಕ ವಿಶ್ವದ ೩ ಪ್ರಭಾವಿ ಮಹಿಳೆಯರಲ್ಲಿ ಒಬ್ಬರು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ.ಪರಮಶಿವಮೂರ್ತಿ ನುಡಿ ನಮನ ಸಲ್ಲಿಸಿದ್ದಾರೆ. ಹಂಪಿ ವಿಶ್ವವಿದ್ಯಾಲಯದಲ್ಲಿ ನಡೆದ ಸಾಲುಮರದ ತಿಮ್ಮಕ್ಕ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಿಮ್ಮಕ್ಕ ಸಾಧನೆಯನ್ನು ಗುರುತಿಸಿ ಸಾಲುಮರದ ತಿಮ್ಮಕ್ಕ ಅವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯವು ೨೦೧೦ರಲ್ಲಿ ಪ್ರತಿಷ್ಠಿತ ನಾಡೋಜ ಪದವಿ ನೀಡಿ ಗೌರವಿಸಿದೆ ಎಂದು ಸ್ಮರಿಸಿದ್ದಾರೆ.

ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಬಿಂಕದಕಟ್ಟಿಯ ಸಾಲುಮರದ ತಿಮ್ಮಕ್ಕ ಉದ್ಯಾನವನದಲ್ಲಿ ಸಾಲುಮರದ ತಿಮ್ಮಕ್ಕ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಪ್ರಕೃತಿ ಸಂರಕ್ಷಣೆಗೆ ತಮ್ಮ ಬದುಕನ್ನೇ ಅರ್ಪಿಸಿ ಸಾವಿರಾರು ವೃಕ್ಷಗಳನ್ನು ನೆಟ್ಟು ಬೆಳೆಸಿದ ಸಾಲು ಮರದ ತಿಮ್ಮಕ್ಕ ಅವರ ಅಪಾರ ಪರಿಸರ ಸೇವೆಯನ್ನು ಸ್ಮರಿಸಿ ಸ್ವಯಂಸೇವಕರು ಉದ್ಯಾನವನದಲ್ಲಿ ಸಸಿಗಳನ್ನು ನೆಟ್ಟು “ಹಸಿರು ನಮನ” ಸಲ್ಲಿಸಿದರು.

******* ಮುಕ್ತಾಯ *******